All India Radio: Bangalore

**Regional Bulletin In Kannada**

**11.08.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**11.08.2025 / 2.30 p.m.**

**<><><><>**

ಮುಖ್ಯಾಂಶಗಳು

ಮುಖ್ಯಾಂಶಗಳು

೧. ವಿಧಾನಮಂಡಲದ ಉಭಯ ಸದನಗಳ ಅಧಿವೇಶನ ಆರಂಭ; ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ

೨. ಅರ್ಹ ಪಡಿತರ ಚೀಟಿದಾರರಿಗೆ ಆಹಾರಧಾನ್ಯ ವಿತರಿಸಲು ತಾಂತ್ರಿಕ ಸಮಸ್ಯೆ ಇಲ್ಲ; ಮೇಲ್ಮನೆಯಲ್ಲಿ ಸಚಿವ ಕೆ.ಎಚ್.ಮುನಿಯಪ್ಪ ಸ್ಪಷ್ಟನೆ.

೩. ಮತಗಳ್ಳತನ ಹೇಳಿಕೆ; ರಾಹುಲ್ ಗಾಂಧಿ ವಿರುದ್ಧ ಚುನಾವಣಾ ಆಯೋಗ ನೋಟಿಸ್

೪. ಇಂದಿನಿಂದ ಮೈಸೂರಿನಲ್ಲಿ ಮಹಾರಾಜ ಟ್ರೋಫಿ ಕ್ರಿಕೆಟ್ ಪಂದ್ಯಾವಳಿ

><><><><><><><><><><

ವಿಧಾನಮಂಡಲದ ಮಳೆಗಾಲದ ಅಧಿವೇಶನದ ಮೊದಲ ದಿನವಾದ ಇಂದು ಬೆಳಗ್ಗೆ ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ಯು.ಟಿ.ಖಾದರ್ ಇತ್ತೀಚೆಗೆ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ನಿರ್ಣಯವನ್ನು ಮಂಡಿಸಿದರು. ಇತ್ತೀಚೆಗೆ ನಿಧನ ಹೊಂದಿದ ಮಾಜಿ ಸಚಿವ ಬೇಗಾನೆ ರಾಮಯ್ಯ, ಹಿರಿಯ ನಟಿ ಬಿ. ಸರೋಜಾದೇವಿ, ವಿಜ್ಞಾನಿ ಕಸ್ತೂರಿ ರಂಗನ್, ಸಾಹಿತಿಗಳಾದ ಜಿ.ಎಸ್.ಸಿದ್ದಲಿಂಗಯ್ಯ, ಎಚ್.ಎಸ್.ವೆಂಕಟೇಶಮೂರ್ತಿ, ಕ್ರೈಸ್ತರ ಧರ್ಮಗುರು ಪೋಪ್ ಫ್ರಾನ್ಸಿಸ್ ಹಾಗೂ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಯ ಕಾಲ್ತುಳಿತ, ಪಹಲ್ಗಾಮ್ ಉಗ್ರರ ದಾಳಿ ಮತ್ತು ಅಹಮದಾಬಾದ್‌ನ ವಿಮಾನ ದುರಂತದಲ್ಲಿ ಮೃತಪಟ್ಟವರು ಸೇರಿದಂತೆ ಹಲವು ಗಣ್ಯರಿಗೆ ವಿಧಾನಮಂಡಲದ ಉಭಯ ಸದನಗಳಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

><><><><><><><><><><

ಅರ್ಹ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲದೆ ಸಮರ್ಪಕವಾಗಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ಅವರು ವಿಧಾನ ಪರಿಷತ್ತಿಗೆ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಆಡಳಿತ ಪಕ್ಷದ ಸದಸ್ಯ ಎಂ. ನಾಗರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ತಂತ್ರಾಂಶದಲ್ಲಿ

ಯಾವುದೇ ದೋಷ ಇಲ್ಲ ಎಂದು ಸ್ಪಷ್ಟಪಡಿಸಿದರು. ಕೆಲದಿನಗಳ ಹಿಂದೆ ಕಾಣಿಸಿಕೊಂಡ ತಾಂತ್ರಿಕ ದೋಷ ಸರಿಪಡಿಸಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಗಳಿಲ್ಲ. ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚುವ ಕೆಲಸ ನಿರಂತರವಾಗಿ ನಡೆಯುತ್ತಲೇ ಇದೆ. ಬಿಪಿಎಲ್ ಪಡಿತರ ಪಟ್ಟಿಯಲ್ಲಿ ಇರುವ ಅನರ್ಹ ಚೀಟಿದಾರರನ್ನು ತೆಗೆದು ಎಪಿಎಲ್ ಪಟ್ಟಿಗೆ ವರ್ಗಾವಣೆ ಮಾಡುವ ಕೆಲಸ ನಡೆಯುತ್ತಿದೆ ಎಂದು ಸಚಿವರು ತಿಳಿಸಿದರು. ಕಾಳಸಂತೆಯಲ್ಲಿ ಪಡಿತರ ಧಾನ್ಯಗಳನ್ನು ಮಾರಾಟ ಮಾಡುವ ಚಟುವಟಿಕೆಗಳನ್ನು ತಡೆಗಟ್ಟಲು ಇಲಾಖೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ಅವರು ಹೇಳಿದರು.

><><><><><><><><

ಮತಗಳ್ಳತನ ಹೇಳಿಕೆ ಕುರಿತಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ. ಹೇಳಿಕೆ ಕುರಿತು ಸರಿಯಾದ ಸಾಕ್ಷ್ಯ ಒದಗಿಸುವಂತೆ  ಚುನಾವಣಾ ಆಯೋಗ ರಾಹುಲ್ ಗಾಂಧಿ ಅವರನ್ನು ಕೇಳಿದೆ. ಈ ನಡುವೆ, ನವದೆಹಲಿಯಲ್ಲಿ ಚುನಾವಣಾ ಆಯೋಗದ ವಿರುದ್ಧ ಐಎನ್‌ಡಿಐ ಒಕ್ಕೂಟದ ನಾಯಕರು ಪ್ರತಿಭಟನಾ ಮೆರವಣಿಗೆ ನಡೆಸಿದರು. ಈ ವೇಳೆ ಮಾತನಾಡಿದ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಕರ್ನಾಟಕ ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನವಾಗಿದ್ದು, ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗ ಏಕೆ ಕ್ರಮ ಕೈಗೊಳ್ಳಲಿಲ್ಲ ಎಂದು ಪ್ರಶ್ನಿಸಿದರು.

><><><><><><><><

ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಸೂರ್ಯ ಘರ್ ಉಚಿತ ವಿದ್ಯುತ್ ಯೋಜನೆಯು ಮೇಲ್ಛಾವಣಿಯ ಸೌರ ಫಲಕಗಳನ್ನು ಸ್ಥಾಪಿಸಲು ಸಹಾಯಧನವನ್ನು ಒದಗಿಸುತ್ತದೆ ಮತ್ತು ಮನೆಗಳಿಗೆ ಉಚಿತ ವಿದ್ಯುತ್‌ಅನ್ನು ನೀಡುತ್ತದೆ.ಯೋಜನೆಯು ಛಾವಣಿಯ ಸೌರ ಫಲಕಗಳ ಸ್ಥಾಪನೆಗೆ ಅನುಕೂಲವಾಗುವಂತೆ ೦೧ ಕೋಟಿ ಮನೆಗಳಿಗೆ ಉಚಿತ ವಿದ್ಯುತ್‌ನ್ನು ಒದಗಿಸುವ ಗುರಿಯನ್ನು ಹೊಂದಿದೆ.ಮೇಲ್ಛಾವಣಿಯ ಸೋಲಾರ್ ಪ್ಯಾನಲ್ ವ್ಯವಸ್ಥೆಯನ್ನು ಸ್ಥಾಪಿಸುವ ವೆಚ್ಚದ ೬೦% ವರೆಗೆ ಸರ್ಕಾರವು ಸಹಾಯ ಧನವನ್ನು ನೀಡುತ್ತದೆ, ಗರಿಷ್ಠ ಮಿತಿ ೭೮ ಸಾವಿರ ರೂಪಾಯಿ. ಕುಟುಂಬಗಳು ತಿಂಗಳಿಗೆ ೩೦೦ ಯೂನಿಟ್‌ಗಳವರೆಗೆ ಉಚಿತ ವಿದ್ಯುತ್‌ನ್ನು ಪಡೆಯಬಹುದು. ಈ ಕುರಿತು ವಿಜಯಪುರದ ಯೋಜನೆಯ ಫಲಾನುಭವಿ ಮೋಹನ್ ಆಕಾಶವಾಣಿಯೊಂದಿಗೆ ಮಾತನಾಡಿದ್ದಾರೆ.

ಧ್ವನಿ- ಮೋಹನ್( ೨೭ ಸೆಕೆಂಡುಗಳು)

><><><><><><><><

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಮೈಸೂರಿಗೆ ಆಗಮಿಸಿರುವ ದಸರಾ ಗಜಪಡೆಗೆ ಇಂದು ತೂಕ ಪರೀಕ್ಷೆ ನಡೆಸಲಾಯಿತು. ತೂಕ ಪರೀಕ್ಷೆಯಲ್ಲಿ ಭೀಮ

ಆನೆಯು ಕ್ಯಾಪ್ಟನ್ ಅಭಿಮನ್ಯುವನ್ನೇ ಹಿಂದಿಕ್ಕಿ ಅತ್ಯಂತ ಹೆಚ್ಚಿನ ತೂಕ ಹೊಂದಿದೆ. ತೂಕ ಪರಿಶೀಲನೆ ನಂತರ ಆನೆಗಳಿಗೆ ಪ್ರತಿನಿತ್ಯ ಪೌಷ್ಟಿಕ ಆಹಾರ ನೀಡಿ ತಯಾರಿ ನಡೆಸಲಾಗುತ್ತದೆ. ಈ ಮೂಲಕ ವಿಜಯದಶಮಿ ಜಂಬೂಸವಾರಿ ಮೆರವಣಿಗೆಗಾಗಿ ತಾಲೀಮು ನಡೆಸಲು ಎಲ್ಲಾ ರೀತಿಯ ತಯಾರಿ ನಡೆಸಲಾಗುತ್ತದೆ.

><><><><><><><><><

ಬಳ್ಳಾರಿಯಲ್ಲಿ ಇಂದು ಸ್ವಾತಂತ್ರೋತ್ಸವದ ಹಿನ್ನೆಲೆಯಲ್ಲಿ ಬಿಜೆಪಿಯಿಂದ ಹರ್ ಘರ್ ತಿರಂಗಾ ಯಾತ್ರೆ ನಡೆಸಲಾಯಿತು. ಮಾಜಿ ಶಾಸಕ ಸೋಮಶೇಖರ ರೆಡ್ಡಿ ಚಾಲನೆ ನೀಡಿದರು. ನಗರದ ಅಮರ್ ಜವಾನ್ ಸ್ಮಾರಕಕ್ಕೆ ನಮನ ಸಲ್ಲಿಸುವ ಮೂಲಕ ರಾಷ್ಟ್ರ ಧ್ವಜ ಹಿಡಿದು ಬೈಕ್ ನಲ್ಲಿ ನೂರಾರು ಯುವಕರು ನಗರದ ಪ್ರಮುಖ ರಸ್ತೆಗಳಲ್ಲಿ ರ್‍ಯಾಲಿ ನಡೆಸಿದರು. ೭೫ನೇ ಸ್ವಾತಂತ್ರ್ಯೋತ್ಸವದ ಭಾಗವಾಗಿ ಕೇಂದ್ರ ಸರ್ಕಾರ ಹರ್ ಘರ್ ತಿರಂಗಾ ಯಾತ್ರೆಗೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಬಿಜೆಪಿ ಘಟಕ ನಾಳೆ ಇತಿಹಾಸ ಪ್ರಸಿದ್ಧ ದಕ್ಷಿಣ ಜಲಿಯನ್ ವಾಲಾಬಾಗ್ ಖ್ಯಾತಿಯ ವಿಧುರಾಶ್ವತ್ಥದಲ್ಲಿ ಹರ್ ಘರ್ ತಿರಂಗಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

><><><><><><><><><

ಭಾರತೀಯ ಅಂಚೆ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಮತ್ತು ಎನ್.ಇ.ಬಿ ಕ್ರೀಡಾ ಸಂಸ್ಥೆಯ ಸಹಯೋಗದೊಂದಿಗೆ ಇದೇ ಮೊದಲ ಬಾರಿಗೆ ಅಕ್ಟೋಬರ್ ೨೬ರಂದು ಮೈಸೂರು ಮ್ಯಾರಥಾನ್ ಆಯೋಜಿಸುತ್ತಿದೆ. ಈ ಸಂಬಂಧ ಇಂದು ಲಾಂಚನ ಹಾಗೂ ವಿಶೇಷ ಅಂಚೆ ಪೋಸ್ಟ್ ಕಾರ್ಡ್ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಓಟಗಾರರು ಮ್ಯಾರಥಾನ್, ಹಾಫ್ ಮ್ಯಾರಥಾನ್, ೧೦ ಕಿಲೋ ಮೀಟರ್ ಹಾಗೂ ೫ ಕಿಲೋಮೀಟರ್‌ಗಳನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಕರ್ನಾಟಕದ ಅಂಚೆ ಮಹಾನಿರ್ದೇಶಕ ಕೆ. ಪ್ರಕಾಶ್ ಮಾತನಾಡಿ, ವಿಶ್ವ ಅಂಚೆ ದಿನದ ಅಂಗವಾಗಿ ಈ ಮ್ಯಾರಥಾನ್ ಆಯೋಜಿಸಲಾಗುತ್ತಿದ್ದು, ಆರೋಗ್ಯ ಜೀವನವನ್ನು ಬೆಂಬಲಿಸುವ ಉದ್ದೇಶದಿಂದ ಪಾರಂಪರಿಕ ನಗರವಾದ ಮೈಸೂರಿನಲ್ಲಿ ಪ್ರಥಮಬಾರಿಗೆ ಚಾಮುಂಡಿ ಬೆಟ್ಟವನ್ನು ಒಳಗೊಂಡಂತೆ ಮ್ಯಾರಥಾನ್ ನಡೆಯಲಿದೆ. ಪ್ರತಿವರ್ಷವೂ ಇದನ್ನು ಮುಂದುವರೆಸುವ ಚಿಂತನೆ ಇದೆ ಎಂದರು. ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಠಾರಿಯ, ಜನರನ್ನು ಒಗ್ಗೂಡಿಸಲು ಮ್ಯಾರಥಾನ್ ನಂತಹ ಕ್ರೀಡಾ ಕಾರ್ಯಕ್ರಮಗಳು ಸಹಕಾರಿ, ಮೈಸೂರಿನಲ್ಲಿ ಪ್ರಥಮ ಬಾರಿಗೆ ಮ್ಯಾರಥಾನ್ ಆಯೋಜನೆಗೊಂಡಿರುವುದು ಸಂತಸ ನೀಡಿದೆ ಎಂದರು. ಎನ್.ಇ.ಬಿ ಕ್ರೀಡಾ ಸಂಸ್ಥೆಯ ನಾಗರಾಜ್ ಅಡಿಗ, ಮೈಸೂರಿನಲ್ಲಿ ನಡೆಯುವ ಮ್ಯಾರಥಾನ್‌ನಲ್ಲಿ ಸ್ಥಳೀಯರು ಸೇರಿದಂತೆ ದೇಶದ ವಿವಿಧ ಭಾಗಗಳ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದರು.

><><><><><><><><><

ದಾವಣಗೆರೆ ಸೇರಿದಂತೆ ರಾಜ್ಯದ ಇತರೆ ಮಹಾನಗರಗಳಲ್ಲಿ ಐಟಿ ಕಂಪನಿಗಳನ್ನು ಸ್ಥಾಪಿಸುವ ಕುರಿತು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಭಾರತೀಯ ಸಾಫ್ಟ್‌ವೇರ್ ತಂತ್ರಜ್ಞಾನ ಪಾರ್ಕ್‌ಗಳ - ಎಸ್‌ಟಿಪಿಐ ನಿರ್ದೇಶಕ ಡಾ. ಸಂಜಯ್ ತ್ಯಾಗಿ ಅವರೊಂದಿಗೆ ಚರ್ಚೆ ನಡೆಸಿದರು. ನಗರದ ಐಟಿ ಪಾರ್ಕ್‌ನಲ್ಲಿ ನಡೆದ ವಿಡಿಯೋ ಸಂವಾದದಲ್ಲಿ, ಸರ್ಕಾರದ ಐಟಿಬಿಟಿ ಮಂತ್ರಾಲಯದ 'ಬಿಯಾಂಡ್ ಬೆಂಗಳೂರು' ಕಲ್ಪನೆಯಡಿಯಲ್ಲಿ ಸಾಫ್ಟ್‌ವೇರ್ ಕಂಪನಿಗಳನ್ನು ಬೆಂಗಳೂರಿನಿಂದ ಹೊರಗಡೆ ಕರೆ ತಂದು ಕಂಪನಿಗಳನ್ನು ಉತ್ತೇಜಿಸುವ ನಿಯಮಗಳ ಬಗ್ಗೆಯೂ ಚರ್ಚೆ ನಡೆಸಿದರು. ದಾವಣಗೆರೆಗೂ ಎಸ್‌ಟಿಪಿಐ ಕಾರ್ಯಚಟುವಟಿಕೆಗಳನ್ನು ವಿಸ್ತರಿಸುವ ಉದ್ದೇಶದಿಂದ, ಈಗಾಗಲೇ ಎಸ್‌ಟಿಪಿಐ ಬೇಡಿಕೆಯಂತೆ ೨ ಎಕರೆ ಸೂಕ್ತ ಜಾಗದ ಜೊತೆಗೆ ಐಟಿ ಪಾರ್ಕ್ ಸ್ಥಾಪನೆಗಾಗಿ ಹೆಚ್ಚುವರಿ ಸ್ಥಳಾವಕಾಶ ಕಲ್ಪಿಸುವ ದಿಶೆಯಲ್ಲಿ ಪರಿಶೀಲನೆ ನಡೆಸಲಾಗಿದೆ ಎಂದು ಸಂಸದರು ಹೇಳಿದರು.

><><><><><><><><><

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ - ಕೆಎಸ್‌ಸಿಎ ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ ಕ್ರಿಕೆಟ್ ಪಂದ್ಯಾವಳಿ ಇಂದಿನಿಂದ ಮೈಸೂರಿನಲ್ಲಿ ಆರಂಭವಾಗಲಿದೆ. ಇಂದಿನಿಂದ ಇದೇ ೨೮ರ ವರೆಗೆ ಪಂದ್ಯಗಳು ನಡೆಯಲಿವೆ. ಮೊದಲ ದಿನವಾದ ಇಂದು ಗುಲ್ಬರ್ಗಾ ಮಿಸ್ಟಿಕ್ಸ್ ಹಾಗೂ ಮಂಗಳೂರು ಡ್ರಾಗನ್ಸ್ ನಡುವೆ ಉದ್ಘಾಟನಾ ಪಂದ್ಯ ನಡೆಯಲಿದೆ. ಎರಡನೇ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಮೈಸೂರು ವಾರಿಯರ್ಸ್ ಹಾಗೂ ಬೆಂಗಳೂರು ಬ್ಲಾಸ್ಟರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯಾವಳಿಯ ಆತಿಥ್ಯ ವಹಿಸಲು ಮಾನಸ ಗಂಗೋತ್ರಿಯಲ್ಲಿರುವ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣ ಸಜ್ಜಾಗಿದೆ. ಒಟ್ಟು ೩೪ ಪಂದ್ಯಗಳು ನಡೆಯಲಿದ್ದು, ಪ್ರೇಕ್ಷಕರ ವೀಕ್ಷಣೆಗೆ ಅವಕಾಶವಿರುವುದಿಲ್ಲ.

><><><><><><><><><

ಫ್ರಾನ್ಸ್‌ನಲ್ಲಿ ಸೆಪ್ಟೆಂಬರ್ ೧೩ ರಿಂದ ನಡೆಯಲಿರುವ ಜಗತ್ತಿನ ಅತೀ ದೊಡ್ಡ ಅಂತಾರಾಷ್ಟ್ರೀಯ ರಾಷ್ಟ್ರೀಯ ಗಾಳಿಪಟ ಉತ್ಸವದಲ್ಲಿ ಭಾರತದ ಪ್ರತಿನಿಧಿಯಾಗಿ 'ಟೀಮ್ ಮಂಗಳೂರು' ಹವ್ಯಾಸಿ ಗಾಳಿಪಟ ತಂಡ ಭಾಗವಹಿಸಲು ಸಜ್ಜಾಗಿದೆ. ೧೨ ದೇಶಗಳು ಭಾಗವಹಿಸಲಿರುವ ಈ ಉತ್ಸವದಲ್ಲಿ ಮಂಗಳೂರು ತಂಡ ಭಾರತದ ಧಾರ್ಮಿಕ ಮತ್ತು ಸಾಂಸ್ಕೃತಿಕ ಸೊಗಡನ್ನು ಪರಿಚಯಿಸಲಿದೆ. ಇದಕ್ಕಾಗಿ ರಥದ ವಿನ್ಯಾಸದ ೨೦ ಅಡಿ ಎತ್ತರ ೧೦ ಅಡಿ ಅಗಲದ ಗಾಳಿಪಟ ಸಿದ್ಧಗೊಳ್ಳುತ್ತಿದೆ. ಜೊತೆಗೆ ನೀರಿನ ಮಹತ್ವ ಸಾರುವ ಗಾಳಿಪಟವೂ ಫ್ರಾನ್ಸ್ ಬಾನಂಗಳದಲ್ಲಿ ಹಾರಾಡಲಿದೆ. ಅಂತಾರಾಷ್ಟ್ರೀಯ ಗಾಳಿಪಟದ ಉತ್ಸವದ ಕುರಿತಂತೆ ಕಲಾವಿದ ದಿನೇಶ್ ಹೊಳ್ಳ ಅವರು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

(ಧ್ವನಿ ದಿನೇಶ್ ಹೊಳ್ಳ- ೨೩ ಸೆಕೆಂಡುಗಳು)

><><><><><><><><><

ಕೂಡಲಸಂಗಮದಲ್ಲಿ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಅನುಭವ ಮಂಟಪ ನಿರ್ಮಾಣ ಮಾಡುತ್ತಿದ್ದು, ಈಗಾಗಲೇ ೩೫೦ ಕೋಟಿ ರೂಪಾಯಿ ಕೆಲಸ ಮಾಡಲಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ಹಾಸನದಲ್ಲಿ ಹೇಳಿದ್ದಾರೆ. ಹಳೇಬೀಡು ಬಳಿಯ ಪುಷ್ಪಗಿರಿಯ ಸಭಾಂಗಣದಲ್ಲಿ ನಿನ್ನೆ ನಡೆದ ಮೈಸೂರು ವಿಭಾಗ ಮಟ್ಟದ ವೀರಶೈವ ಲಿಂಗಾಯತ ಮಹಾಸಭಾ ಪದಾಧಿಕಾರಿಗಳ ಕಾರ್ಯಾಗಾರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

><><><><><><><><